ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 23 ನೇ ಸೆಪ್ಟೆಂಬರ್, 2020

ಇಂದಿರಾಗಾಂಧಿ ವಸತಿ ಶಾಲೆಗಳ ಕಟ್ಟಡ ನಿರ್ಮಾಣ ಹಾಗೂ ಕಾಮಗಾರಿಗಳ ಗುಣಮಟ್ಟದ ಬಗ್ಗೆ

ಶ್ರೀ ಅಲ್ಲಂ ವೀರಭದ್ರಪ್ಪ (ವಿಧಾನಸಭೆಯಿಂದ ಚುನಾಯಿತರಾದವರು) –

40 (323) ಉಪ ಮುಖ್ಯಮಂತ್ರಿಗಳು ಮತ್ತು ಲೋಕೋಪಯೋಗಿ ಹಾಗೂ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ವಿವಿಧ ಜಿಲ್ಲೆಗಳಲ್ಲಿ ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ನಡೆಯುತ್ತಿರುವ ಇಂದಿರಾಗಾಂಧಿ ವಸತಿ ಶಾಲೆಗಳ ಕಟ್ಟಡ ನಿರ್ಮಾಣವಾಗುತ್ತಿದೆಯೇ;

(ಆ) ಹಾಗಿದ್ದಲ್ಲಿ, ಸದರಿ ಕಾಮಗಾರಿಗಳನ್ನು ಯಾವ ಯಾವ ಗುತ್ತಿಗೆದಾರರಿಗೆ ವಹಿಸಲಾಗಿದೆ; ಈ ಕಾಮಗಾರಿಗಳ ಅಂದಾಜು ವೆಚ್ಚ ಹಾಗೂ ಟೆಂಡರಿನ ಹಣದ ಬಗ್ಗೆ ಸಂಪೂರ್ಣ ಮಾಹಿತಿ ನೀಡುವುದು;

(ಇ) ರಾಜ್ಯದ ಬಹುತೇಕ ಕಾಮಗಾರಿಗಳು ಕಳಪೆ ಮಟ್ಟದಲ್ಲಿ ನಿರ್ಮಾಣವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;ಈ ಎಲ್ಲಾ ಕಾಮಗಾರಿಗಳಿಗೆ ಗುಣಮಟ್ಟ ಪರಿಶೀಲನಾ ಪ್ರಾಧಿಕಾರದಿಂದ ವರದಿ ಪಡೆಯಲಾಗಿದೆಯೇ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಕಳಪೆ ಕಾಮಗಾರಿಯ ಬಗ್ಗೆ ಸರ್ಕಾರದ ಕ್ರಮವೇನು?